ಇದ್ದುದರಿಂದ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿ ಸದರಿ 6 ಗ್ರಾಮಗಳಿಗೆ ನೀರು ಸರಬರಾಜು ಮಾಡಲು ಸಾಧ್ಯವಾಗಿಲ್ಲ.

ಇ) ಈ ತಾಂತ್ರಿಕ ತೊಂದರೆಯನ್ನು ನಿವಾರಿಸಲು ಜಾಕ್‌ವೆಲ್ ಹತ್ತಿರ ಕೊಳವೆಬಾವಿಗಳನ್ನು ತುಂಗಭದ್ರ ನದಿಯ ದಂಡೆಯಲ್ಲಿ ಕೊರೆದು ಅವುಗಳಿಗೆ ಪಂಪುಗಳನ್ನು ಅಳವಡಿಸಿ, ಬೇಸಿಗೆಯಲ್ಲಿ ಸಹ ನೀರು ಪೂರೈಸಲು ಕ್ರಮಕೈಗೊಳ್ಳಲಾಗಿದೆ. ಆದಾಗ್ಯೂ ಪೈಪುಗಳಲ್ಲಿ ನೀರು ಸೋರುವಿಕೆಯಾಗಿ, ಫಲಕಾರಿಯಾಗಿಲ್ಲ. ಆದುದರಿಂದ ಪೈಪುಗಳ ದುರಸ್ತಿ ಹಾಗೂ ಕೆ.ಪಿ.ಟಿ.ಸಿ.ಎಲ್.ನ ರೂ.30.00 ಲಕ್ಷ ಬಾಕಿ ಬಿಲ್ ಪಾವತಿ ಕುರಿತು ಜಿಲ್ಲಾ ಪಂಚಾಯಿತಿ ಕ್ರಮವಹಿಸುತ್ತಿದೆ.

ಪದವಿ ಪೂರ್ವ ಕಾಲೇಜಿನಲ್ಲಿ ಕೊಠಡಿಗಳ ಕೊರತೆ.

35(116) ಶ್ರೀ ಎಂ.ಶ್ರೀನಿವಾಸ್:(ಮಂಡ್ಯ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರದ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಕೊರತೆಯಿರುವ ಕೊಠಡಿಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ವಿದ್ಯಾರ್ಥಿಗಳಿಗೆ ಪಾಠ ಪ್ರವಚನಗಳಿಗೆ ಹಾಗೂ ಪ್ರಯೋಗ ಶಾಲೆಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಇ) ಹಾಗಿದ್ದಲ್ಲಿ ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಜರೂರು ಕ್ರಮ ಕೈ ಗೊಳ್ಳುವುದೇ;

ಈ) ಹಾಗಿದ್ದಲ್ಲಿ, ಎಂದಿನಿಂದ ಕೊಠಡಿಗಳ ಕಾಮಗಾರಿ ಕೈ ಗೋಳ್ಳಲಾಗುವುದು? ವಿವರಗಳನ್ನು ನೀಡುವುದು.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಬಂದಿದೆ

ಆ) ಗ್ರಾಮಾಂತರ ಪ್ರದೇಶಗಳ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಕಟ್ಟಡಗಳನ್ನು ನಬಾರ್ಡ್ ಅನುದಾನದಲ್ಲಿ ಒದಗಿಸಲಾಗುತ್ತಿದೆ. ಅದರೆ ನಗರ ಪ್ರದೇಶದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಕಟ್ಟಡಗಳನ್ನು ರಾಜ್ಯ ಸರ್ಕಾರದ ಅನುದಾನದಲ್ಲಿ ಒದಗಿಸಬೇಕಾಗಿರುತ್ತದೆ. ಲಭ್ಯವಿರುವ ಅನುದಾನದಲ್ಲಿ ಹಂತ ಹಂತವಾಗಿ ನಗರ ಪ್ರದೇಶದ ಕಾಲೇಜುಗಳಿಗೆ ಕಟ್ಟಡಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ. ಮುಂಬರುವ ವರ್ಷಗಳಲ್ಲಿ ಸದರಿ ಕಾಲೇಜಿಗೂ ಕಟ್ಟಡ ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಬಂದಿದೆ. ವಿದ್ಯಾರ್ಥಿಗಳಿಗೆ ಪಾಠ ಪ್ರವಚನಗಳಿಗೆ ಹಾಗೂ ಪ್ರಯೋಗ ಶಾಲೆಗಳಿಗೆ ತೊಂದರೆಯಾಗದಂತೆ ಸಧ್ಯಕ್ಕೆ ಪ್ರೌಢಶಾಲಾ ವಿಭಾಗದ ಕಟ್ಟಡದಲ್ಲಿ ನಡೆಸಲಾಗುತ್ತಿದೆ.

ಇ) ಕ್ರಮ ಕೈಗೋಳ್ಳಲಾಗುವುದು.

ಈ) ಮುಂಬರುವ ವರ್ಷಗಳಲ್ಲಿ ಅನುದಾನದ ಲಭ್ಯತೆಯನ್ನು ಆಧರಿಸಿ ಹಂತ ಹಂತವಾಗಿ ಕಟ್ಟಡ ಒದಗಿಸಲು ಕ್ರಮ ವಹಿಸಲಾಗುವುದು.

ಟಾಸ್ಕ್‌ಫೋರ್ಸ್ ಸಮಿತಿಯ ನಿಯಮಾವಳಿ

36(243)ಶ್ರೀ ಖಾದರ್ ಯು ಟಿ:(ಮಂಗಳೂರು) ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಾಸಕರ ನೇತೃತ್ವದಲ್ಲಿ ಕುಡಿಯುವ ನೀರಿನ ಸೌಲಭ್ಯಕ್ಕಾಗಿ ರಚಿಸಿರುವ "ಟಾಸ್ಕ್‌ಫೋರ್ಸ್ ಸಮಿತಿಗೆ ಸರ್ಕಾರವು ರೂಪಿಸಿರುವ ನಿಯಮಾವಳಿಗಳಿಂದ ಶಾಶ್ವತ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ನಿಯಮಾವಳಿಯನ್ನು ಸಡಿಲಿಸಿ ಶಾಶ್ವತ ಕುಡಿಯುವ ನೀರನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಜಗದೀಶ್ ಶೆಟ್ಟರ್(ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು):